## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 296-ಎ ರಡಿಯಲ್ಲಿ ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳ ಜಿಲ್ಲಾ ಪಂಚಾಯತಿಗಳಲ್ಲಿ ಹೊಸದಾಗಿ ನೇಮಕಗೊಂಡಿರುವ ಕುಂದು ಕೊರತೆ ನಿವಾರಣಾ ಪ್ರಾಧಿಕಾರಿಗಳಿಗೆ ಹೆಚ್ಚುವರಿ ಜಿಲ್ಲೆಗಳನ್ನು ಹಂಚಿಕೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993ರ ನಿಯಮ 296 (ಎ ಯಿಂದ ಐ) ವರೆಗೆ.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 233 ಗ್ರಾಪಂಅ 2021, ದಿನಾಂಕ:26..07.2021
3. ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 386 ವೆಚ್ಚ-6/2016, ದಿನಾಂಕ:18.05.2018.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ 1993ರ ಪ್ರಕರಣ 296 (ಎ ಯಿಂದ ಐ ) ವರೆಗೆ ಕುಂದು ಕೊರತೆ ನಿವಾರಣಾ ಪ್ರಾಧಿಕಾರಗಳ ಬಗ್ಗೆ ಅವಕಾಶ ಕಲ್ಪಿಸಲಾಗಿದೆ. ಅದರಂತೆ, ಆರ್ಥಿಕ ಇಲಾಖೆಯು ಪ್ರಾಯೋಗಿಕವಾಗಿ ಬೆಂಗಳೂರು (ನಗರ), ಚಿಕ್ಕಮಗಳೂರು, ಕಲಬುರಗಿ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಜಿಲ್ಲಾ ಕುಂದು ಕೊರತೆ ನಿವಾರಣಾ ಪ್ರಾಧಿಕಾರಿಗಳನ್ನು ರಚಿಸಲು ಅವಕಾಶ ಕಲ್ಪಿಸಿರುತ್ತದೆ.

ಮೇಲೆ ಓದಲಾದ (2)ರ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಆಯ್ಕೆ ಸಮಿತಿ ಸಭೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 296-ಎ ರಡಿಯಲ್ಲಿ ಪದತ್ತವಾದ ಅಧಿಕಾರದನ್ವಯ ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಗಳಲ್ಲಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರಿಗಳನ್ನು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅನುಮೋದನೆಯೊಂದಿಗೆ ನೇಮಕಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ(3)ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಪ್ರಾಯೋಗಿಕವಾಗಿ ಪ್ರಾರಂಭಿಸಿರುವ ನಾಲ್ಕು ಜಿಲ್ಲೆಗಳ ಕುಂದು ಕೊರತೆ ನಿವಾರಣಾ ಪ್ರಾಧಿಕಾರಗಳಲ್ಲಿ ಅತಿ ಕಡಿಮೆ ಪ್ರಕರಣಗಳು ದಾಖಲಾಗಿದ್ದು, ಮೊದಲು ಮೇಲಿನ ನಾಲ್ಕು ಪ್ರಾಧಿಕಾರಗಳನ್ನು ಬಲವರ್ಧನೆಗೊಳಿಸಿ, ಇಲ್ಲಿ ಸಮರ್ಥವಾಗಿ ಕಾರ್ಯಗತಗೊಂಡ ನಂತರ ಹಂತಹಂತವಾಗಿ ಇನ್ನು ಕೆಲವು ಜಿಲ್ಲೆಗಳಲ್ಲಿ ಪ್ರಾಧಿಕಾರಗಳನ್ನು ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಬಹುದಾಗಿದೆ ಎಂದು ತಿಳಿಸಿರುತ್ತದೆ. ಆಡಳಿತ ಇಲಾಖೆಯು ಯಾವ ಜಿಲ್ಲೆಗಳಲ್ಲಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರ ಪ್ರಾರಂಭಿಸಲಾಗಿದೆಯೋ ಆ ಪ್ರಾಧಿಕಾರಕ್ಕೆ ನೆರೆಹೊರೆ ಜಿಲ್ಲೆಗಳ ಕುಂದು ಕೊರತೆಗಳನ್ನು ವ್ಯವಹರಿಸಲು ಕೂಡ ಹಂಚಿಕೆ ಮಾಡುವಂತೆ ಸಲಹೆ ನೀಡಿರುತ್ತದೆ.

**ಆದ್ದರಿಂದ ಈ ಆದೇಶ**

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 233 ಗ್ರಾಪಂಅ 2021, ಬೆಂಗಳೂರು, ದಿನಾಂಕ:06.08.2021.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 296-ಎ ರಡಿಯಲ್ಲಿ ಪದತ್ತವಾದ ಅಧಿಕಾರದನ್ವಯ ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಗಳಲ್ಲಿ ನೇಮಕಗೊಂಡಿರುವ ಪ್ರಾಧಿಕಾರಗಳ ಅಧಿಕಾರಿಗಳು ಹೆಚ್ಚುವರಿಯಾಗಿ ಈ ಕೆಳಕಂಡ ಜಿಲ್ಲೆಗಳ ಜಿಲ್ಲಾ ಪಂಚಾಯತಿಯಲ್ಲಿ ಹೆಚ್ಚುವರಿಯಾಗಿ ಕಾರ್ಯವನ್ನು ನಿರ್ವಹಿಸುವಂತೆ ಸರ್ಕಾರವು ಆದೇಶಿಸಿದೆ.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಬೆಂಗಳೂರು (ಗ್ರಾಮಾಂತರ), ತುಮಕೂರು, ಮೈಸೂರು, ಹಾಸನ, ಬಾಗಲಕೋಟೆ, ವಿಜಯಪುರ, ಯಾದಗಿರಿ ಮತ್ತು ಬೀದರ್ ಜಿಲ್ಲೆ ರವರುಗಳು ತಮ್ಮ ಕಛೇರಿಯಲ್ಲಿ ಒಬ್ಬರು ಪ್ರಥಮ ದರ್ಜೆ ಸಹಾಯಕರನ್ನು ಸಾರ್ವಜನಿಕ ಕುಂದು ಕೊರತೆ ನಿವಾರಣಾ ಪ್ರಾಧಿಕಾರಕ್ಕೆ ನೇಮಿಸಿ ಜಿಲ್ಲೆಯ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿ/ಗ್ರಾಮ ಪಂಚಾಯತಿಗಳ ಬಗ್ಗೆ ಬರುವ ದೂರುಗಳನ್ನು ಸ್ವೀಕರಿಸಿ, ಆಯಾಯ ಸಾರ್ವಜನಿಕ ಕುಂದು ಕೊರತೆ ಪ್ರಾಧಿಕಾರಿಗಳಿಗೆ ವರದಿ ಮಾಡುವುದು ಮತ್ತು ಅವರ ನಿರ್ದೇಶನದಂತೆ ಕರ್ತವ್ಯ ನಿರ್ವಹಿಸುವುದು.

| ಕ್ರ.ಸಂ. | ಸಾರ್ವಜನಿಕ ಕುಂದು ಕೊರತೆ ನಿವಾರಣಾ ಪ್ರಾಧಿಕಾರದ ಹೆಸರು | ಕುಂದು ಕೊರತೆ ಪ್ರಾಧಿಕಾರಕ್ಕೆ ವಹಿಸಲಾದ ಜಿಲ್ಲೆಗಳು |
|---|---|---|
| 1. | ಬೆಂಗಳೂರು (ನಗರ) ಕುಂದು ಕೊರತೆ ನಿವಾರಣಾ ಪ್ರಾಧಿಕಾರ | ಬೆಂಗಳೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ಬೆಂಗಳೂರು (ನಗರ), ಬೆಂಗಳೂರು (ಗ್ರಾಮಾಂತರ) ಮತ್ತು ತುಮಕೂರು ಜಿಲ್ಲೆಗಳು |
| 2. | ಚಿಕ್ಕಮಗಳೂರು ಕುಂದು ಕೊರತೆ ನಿವಾರಣಾ ಪ್ರಾಧಿಕಾರ | ಮೈಸೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ಚಿಕ್ಕಮಗಳೂರು, ಮೈಸೂರು ಮತ್ತು ಹಾಸನ ಜಿಲ್ಲೆಗಳು |
| 3. | ಬೆಳಗಾವಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರ | ಬೆಳಗಾವಿ ವಿಭಾಗದ ವ್ಯಾಪ್ತಿಯಲ್ಲಿ ಬರುವ ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳು |
| 4. | ಕಲಬುರಗಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರ | ಕಲಬುರಗಿ ವಿಭಾಗದ ವ್ಯಾಪ್ತಿಯಲ್ಲಿ ಬರುವ ಕಲಬುರಗಿ, ಯಾದಗಿರಿ ಮತ್ತು ಬೀದರ್ ಜಿಲ್ಲೆಗಳು |

ಮೇಲ್ಕಂಡ ಕುಂದು ಕೊರತೆ ನಿವಾರಣಾ ಪ್ರಾಧಿಕಾರಗಳ ಅಧಿಕಾರಿಗಳು, ಮೇಲ್ಕಂಡ ಜಿಲ್ಲೆಗಳಲ್ಲಿ ಪ್ರತಿ ಮಾಹೆಯಲ್ಲಿ ಕಡ್ಡಾಯವಾಗಿ 4 ಬಾರಿ ಭೇಟಿ ನೀಡಿ ದೂರು ಅರ್ಜಿಗಳನ್ನು ಪರಿಶೀಲಿಸಿ ಇತ್ಯರ್ಥಗೊಳಿಸುವುದು ಹಾಗೂ ಪ್ರತಿ ಮಾಹೆಯ ಪ್ರಗತಿ ವರದಿಗಳನ್ನು ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

6.8.2021

(ಎಲ್. ಕೆ. ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
2. ಡಾ|| ಬೂವನಹಳ್ಳಿ ನಾಗರಾಜ್, ಬೆಂಗಳೂರು (ನಗರ) ಸಾರ್ವಜನಿಕ ಕುಂದು ಕೊರತೆ ನಿವಾರಣಾ ಪ್ರಾಧಿಕಾರ, ಜಿಲ್ಲಾ ಪಂಚಾಯತಿ, ಬೆಂಗಳೂರು
3. ಡಾ|| ಟಿ. ಶ್ರೀನಿವಾಸ ರೆಡ್ಡಿ, ನಿವೃತ್ತ ಅಪರ ನಿರ್ದೇಶಕರು, ಕಲಬುರಗಿ ಸಾರ್ವಜನಿಕ ಕುಂದು ಕೊರತೆ ನಿವಾರಣಾ ಪ್ರಾಧಿಕಾರ, ಜಿಲ್ಲಾ ಪಂಚಾಯತಿ ಕಲಬುರಗಿ.
4. ಡಾ|| ಕೆ.ಎಸ್. ವಿಜಯಪ್ರಕಾಶ್, ಬೆಳಗಾವಿ ಸಾರ್ವಜನಿಕ ಕುಂದು ಕೊರತೆ ನಿವಾರಣಾ ಪ್ರಾಧಿಕಾರ, ಜಿಲ್ಲಾ ಪಂಚಾಯಿತಿ ಬೆಳಗಾವಿ.
5. ಶ್ರೀ ಕರಿಯಪ್ಪ ಕೆ., ಚಿಕ್ಕಮಗಳೂರು ಸಾರ್ವಜನಿಕ ಕುಂದು ಕೊರತೆ ನಿವಾರಣಾ ಪ್ರಾಧಿಕಾರ, ಜಿಲ್ಲಾ ಪಂಚಾಯತಿ ಚಿಕ್ಕಮಗಳೂರು.
6. ಜಿಲ್ಲಾಧಿಕಾರಿಗಳು, ಬೆಂಗಳೂರು (ನಗರ), ಬೆಂಗಳೂರು (ಗ್ರಾಮಾಂತರ), ತುಮಕೂರು, ಚಿಕ್ಕಮಗಳೂರು, ಮೈಸೂರು, ಹಾಸನ, ಬಾಗಲಕೋಟೆ, ವಿಜಯಪುರ, ಯಾದಗಿರಿ ಮತ್ತು ಬೀದರ್ ಜಿಲ್ಲೆಗಳು.
7. ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಬೆಂಗಳೂರು (ನಗರ), ಬೆಂಗಳೂರು (ಗ್ರಾಮಾಂತರ), ತುಮಕೂರು, ಚಿಕ್ಕಮಗಳೂರು, ಮೈಸೂರು, ಹಾಸನ, ಬಾಗಲಕೋಟೆ, ವಿಜಯಪುರ, ಯಾದಗಿರಿ ಮತ್ತು ಬೀದರ್ ಜಿಲ್ಲೆಗಳು.
8. ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು (ನಗರ), ಬೆಂಗಳೂರು (ಗ್ರಾಮಾಂತರ), ತುಮಕೂರು, ಚಿಕ್ಕಮಗಳೂರು, ಮೈಸೂರು, ಹಾಸನ, ಬಾಗಲಕೋಟೆ, ವಿಜಯಪುರ, ಯಾದಗಿರಿ ಮತ್ತು ಬೀದರ್ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ತಾಲ್ಲೂಕು ಪಂಚಾಯಿತಿಗಳು.
9. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಬೆಂಗಳೂರು (ನಗರ), ಬೆಂಗಳೂರು (ಗ್ರಾಮಾಂತರ), ತುಮಕೂರು, ಚಿಕ್ಕಮಗಳೂರು, ಮೈಸೂರು, ಹಾಸನ, ಬಾಗಲಕೋಟೆ, ವಿಜಯಪುರ, ಯಾದಗಿರಿ ಮತ್ತು ಬೀದರ್ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯತಿಗಳು (ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

**ಪ್ರತಿಗಳು:**

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ-ಈ ಆದೇಶವನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸಲು ಕೋರಿದೆ.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
3. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಜಿ.ಪಂ.), ವಿಧಾನಸೌಧ, ಬೆಂಗಳೂರು.
4. ನಿರ್ದೇಶಕರು (ಪಂ.ರಾಜ್-1) ಮತ್ತು ನಿರ್ದೇಶಕರು (ಪಂ.ರಾಜ್-2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಸರ್ಕಾರದ ಅಧೀನ ಕಾರ್ಯದರ್ಶಿ, (ಸೇವೆಗಳು-ಎ, ಬಿ ಮತ್ತು ಸಿ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ. ರಸ್ತೆ, ಬೆಂಗಳೂರು.
8. ಇ-ಆಡಳಿತ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9. ಸಂಪಾದಕರು, ಕರ್ನಾಟಕ ವಿಕಾಸ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
10. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.